ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2017-18 ದಿನಾಂಕ:05-06-2017

# ಪತ್ರಿಕಾ ಆಮಂತ್ರಣ

1. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ”

**ಕಾಕ್ಲಿಯಾರ್ ಇಂಪ್ಲಾಂಟ್ ಯೋಜನೆಗೆ ಚಾಲನೆ ಮತ್ತು 25 ಹಾಸಿಗೆಗಳ ಡಯಾಲಿಸಿಸ್ ಘಟಕದ ಶಿಲಾನ್ಯಾಸ ಸಮಾರಂಭ.**

**ಉದ್ಘಾಟನೆ:**

ಸಿದ್ದರಾಮಯ್ಯ,
ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

**ಪ್ರಾಸ್ತಾವಿಕ ನುಡಿ**

**ಕೆ.ಆರ್. ರಮೇಶ್ ಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.**

**ಅಧ್ಯಕ್ಷತೆ:**

**ದಿನೇಶ್ ಗುಂಡೂರಾವ್, ಗಾಂಧಿನಗರ ವಿಧಾನಸಭಾ ಕ್ಷೇತ್ರ.**

ದಿನಾಂಕ: 06-06-2017, ಮಂಗಳವಾರ, ಸಮಯ: ಬೆಳಿಗ್ಗೆ 9.00 ಗಂಟೆಗೆ

ಸ್ಥಳ: ಕೆ.ಸಿ. ಜನರಲ್ ಆಸ್ಪತ್ರೆ ಆವರಣ, ಮಲ್ಲೇಶ್ವರಂ, ಬೆಂಗಳೂರು.

2. **ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸುರವರ 35 ಪುಣ್ಯ ಸ್ಮರಣೆ ಪ್ರತಿಮೆಗೆ ಮಾಲಾರ್ಪಣೆ:**

ಸಿದ್ದರಾಮಯ್ಯ,
ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ

ಹೆಚ್. ಆಂಜನೇಯ,
ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.

ದಿನಾಂಕ: 06-06-2017, ಮಂಗಳವಾರ, ಸಮಯ: ಬೆಳಿಗ್ಗೆ 10.00 ಗಂಟೆಗೆ

ಸ್ಥಳ: ವಿಧಾನಸೌಧದ ಪಶ್ಚಿಮ ದ್ವಾರದ ಮುಂಭಾಗ,
ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ಪರಿಸರ ಸಂರಕ್ಷಣೆ ನಮ್ಮೆಲ್ಲರ ಆದ್ಯ ಕರ್ತವ್ಯ- ಸಿದ್ದರಾಮಯ್ಯ

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

ಇಂದಿನ ದಿನದಲ್ಲಿ ನಮ್ಮ ಸುತ್ತಲಿನ ಪರಿಸರವನ್ನು ಸಂರಕ್ಷಣೆ ಮಾಡುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ಇಂದು ಕೃಷಿ ವಿಶ್ವವಿದ್ಯಾನಿಲಯದ ಡಾ.ಬಾಬು ರಾಜೇಂದ್ರ ಪ್ರಸಾದ್ ಅಂತರಾಷ್ಟ್ರೀಯ ಸಭಾಂಗಣದಲ್ಲಿ ಅರಣ್ಯ ಇಲಾಖೆ ಮತ್ತು ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ಪರಿಸರ ದಿನಾಚರಣೆಯನ್ನು ತುಳಸಿ ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು ನಾವು ಬರೇ ನಮ್ಮ ಹಕ್ಕುಗಳನ್ನು ಮಾತ್ರ ಕೇಳುವುದು ಸರಿಯಲ್ಲ. ಹಕ್ಕುಗಳ ಜೊತೆಗೆ ನಮ್ಮ ಕರ್ತವ್ಯಗಳನ್ನು ನಿಭಾಯಿಸಿದಾಗ ಮಾತ್ರ ಉತ್ತಮ ಪರಿಸರವನ್ನು ಕಾಪಾಡಲು ಸಾಧ್ಯವೆಂದರು.

ಒಂದು ಕಾಲದಲ್ಲಿ ಬೆಂಗಳೂರು ನಗರವನ್ನು ಉದ್ಯಾನ ನಗರವೆಂದು ಕರೆಯಲಾಗುತಿತ್ತು. ಆದರೆ ಇಂದು ಬೆಂಗಳೂರಿಗೆ ಆ ಹೆಸರು ಉಳಿದಿಲ್ಲ, ಕಾರಣ ಏರುತ್ತಿರುವ ಜನಸಂಖ್ಯೆ. ನಗರದಲ್ಲಿ 1 ಕೋಟಿ 10 ಲಕ್ಷ ಜನಸಂಖ್ಯೆ ಇದ್ದು, ಅಂದಾಜು 65 ಲಕ್ಷ ವಾಹನಗಳು ಬಳಕೆಯಲ್ಲಿದೆ. ವಾಹನಗಳ ಹೊಗೆಯಿಂದ ಪರಿಸರ ನೈರ್ಮಲ್ಯ ಹೆಚ್ಚುತ್ತಿದೆ. ಬೆಳ್ಳಂದೂರು ಮತ್ತು ವರ್ತೂರು ಕೆರೆಗಳಿಗೆ ಕಾರ್ಖಾನೆಗಳ ತ್ಯಾಜ್ಯಗಳನ್ನು ಬಿಟ್ಟು ಕಲುಷಿತಗೊಳಿಸಿರುವುದರಿಂದ ಎಂತಹ ದುಷ್ಪರಿಣಾಮವನ್ನು ಎದುರಿಸ ಬೇಕಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ನಾವು ಪರಿಸರದ ಜೊತೆಯಲ್ಲಿಯೇ ಬದುಕಬೇಕು, ಪ್ರಕೃತಿ ನಮಗೆ ಎಲ್ಲವನ್ನು ಕೊಟ್ಟಿರುವಾಗ ಬದಲಿಗೆ ನಾವು ಪ್ರಕೃತಿಗೆ ಏನಾದರೂ ಒಳ್ಳೆಯದನ್ನು ಮಾಡಬೇಕು. ಏನೂ ಮಾಡಲು ಸಾಧ್ಯವಾಗದಿದ್ದರೆ ಕನಿಷ್ಠ ಸುಮ್ಮನಿರಬೇಕು. ಅದು ಬಿಟ್ಟು ಪರಿಸರಕ್ಕೆ ಹಾನಿ ಉಂಟು ಮಾಡಬಾರದು, ಹಾಗೆಯೇ ಎಲ್ಲರೂ ಪರಿಸರ ಸ್ನೇಹಿ ವಸ್ತುಗಳನ್ನೇ ಬಳಕೆ ಮಾಡಬೇಕು. ಆಗ ಮಾತ್ರ ಪರಿಸರವನ್ನು ಸಂರಕ್ಷಿಸಲು ಸಾಧ್ಯ ಎಂದು ಮುಖ್ಯಮಂತ್ರಿ ಅಭಿಪ್ರಾಯಪಟ್ಟರು.

ಈ ಭಾರಿ ವಿಶ್ವ ಪರಿಸರ ದಿನಾಚರಣೆಗೆ "ನೀರಿಗಾಗಿ ಅರಣ್ಯ" ಎಂಬ ಘೋಷ ವಾಕ್ಯವನ್ನು ಮಾಡಲಾಗಿದೆ. ಅಂದರೆ ನೀರಿನ ಉತ್ಪಾದನೆಗಾಗಿ ಅರಣ್ಯವನ್ನು ಉಳಿಸಬೇಕಿದೆ. ಇದಕ್ಕೆ ಪರಿಹಾರವಾಗಿ ಅರಣ್ಯ ಒತ್ತುವರಿಯನ್ನು ತಡಿಗಟ್ಟುವ ಜೊತೆಗೆ ಹೆಚ್ಚು ಮರಗಳನ್ನು ನಡೆಸುವಂತೆ ಅವರು ಅರಣ್ಯ ಸಚಿವರಿಗೆ ಸೂಚನೆ ನೀಡಿದರು.

ಈ ಬಾರಿ ಪರಿಸರ ಸಂಕ್ಷಣೆಯಲ್ಲಿ ತೊಡಗಿರುವ ಪ್ರತಿ ವಿಭಾಗ ಮಟ್ಟದಲ್ಲಿ ಒಂದೊಂದು ಶಾಲೆಯನ್ನು ಗುರುತಿಸಿ ಪ್ರಶಸ್ತಿ ನೀಡಿರುವುದು ಸ್ವಾಗತಾರ್ಹ. ಶಲಾ ಶಿಕ್ಷಕರು ಮಕ್ಕಳಿಗೆ ಪರಿಸರ ನೈರ್ಮಲ್ಯದ ಕುರಿತು ಪ್ರಜ್ಞೆಯನ್ನು ಬೆಳೆಸುವ ಜೊತೆಗೆ ಪರಿಸರ ಸಂರಕ್ಷಣೆಯ ಬಗ್ಗೆ ಆಸಕ್ತಿಯನ್ನು ಹೆಚ್ಚಿಸಬೇಕು. ನಾವು ಕೂಡ ವಿದ್ಯಾರ್ಥಿಗಳಾಗಿದ್ದಾಗ, ಶಾಲಾ ಆವರಣದಲ್ಲಿ ಹೂವು ತರಕಾರಿ ಗಿಡಗಳನ್ನು ನೆಟ್ಟು ಅವಕ್ಕೆ ಕೆರೆ ಮತ್ತು ಬಾವಿಗಳಿಂದ ನೀರನ್ನು ಹೊತ್ತು ತಂದು ಹಾಕಿ ಬೆಳೆಸುತಿದ್ದೆವು, ಎಂದು ತಮ್ಮ ಬಾಲ್ಯವನ್ನು ನೆನಪು ಮಾಡಿಕೊಂಡರು.

ಪ್ರಸ್ತಾವಿಕವಾಗಿ ಮಾತನಾಡಿದ ಅರಣ್ಯ ಸಚಿವ ಬಿ.ರಮಾನಾಥ್ ರೈ ಅವರು ಕಳೆದ ವರ್ಷ 8 ಕೋಟಿ ಗಿಡಗಳನ್ನು ನೆಡಲಾಗಿದ್ದು, ಈ ವರ್ಷದಲ್ಲಿ ರಾಜ್ಯದಾದ್ಯಂತ 6 ಕೋಟಿ ಗಿಡ ನೆಡುವುದು ಮತ್ತು ಸಾಲುಮರದ ತಿಮ್ಮಕ್ಕನ ಹೆಸರಿನಲ್ಲಿ ಬೆಂಗಳೂರು ನಗರದಲ್ಲಿ 50 ಟ್ರೀ ಪಾರ್ಕ್ ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ ಎಂದರಲ್ಲದೆ, ಶಾಲಾ ಮಕ್ಕಳಿಗೆ ಪರಿಸರ ಸಂರಕ್ಷಣೆ ಕುರಿತು ಅರಿವು ಮೂಡಿಸುವ ಸಲುವಾಗಿ " ಚಿಣ್ಣರ ವನದರ್ಶನ " ಕಾರ್ಯಕ್ರಮ ಹಾಕಿಕೊಳ್ಳಲಾಗಿದ್ದು, ಅವರನ್ನು ಕಾಡಿಗೆ ಕರೆದುಕೊಂಡು ಹೋಗಿ ಕಾಡಿನ ಪರಿಚಯವನ್ನು ಮಾಡಿಸಲಾಗುವುದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಂಚೆ ಇಲಾಖೆಯವರು ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಹೊರತಂದಿದ್ದ ಅಂಚೆ ಚೀಟಿಯನ್ನು ಹಾಗೂ ಅರಣ್ಯ ಇಲಾಖೆ ಹೊರತಂದಿದ್ದ "ನೀರಿಗಾಗಿ ಅರಣ್ಯ ಎಂಬ ಮಾಹಿತಿಯುಳ್ಳ ಭಿತ್ತಿ ಪತ್ರವನ್ನು ಮುಖ್ಯಮಂತ್ರಿಗಳು ಬಿಡುಗಡೆ ಮಾಡಿ, ಸೂರ್ಯನಗರದ ಪ್ರಾದೇಶಿಕ ಕಚೇರಿಗೆ ಶಿಲಾನ್ಯಾಸ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರಾದ ಲಕ್ಷ್ಮಣ್, ಕೃಷಿ ವಿಶ್ವವಿದ್ಯಾಲಯದ ಕುಲಪತಿ ಡಾ.ಹೆಚ್ ಶಿವಣ್ಣ ಮಾಲಿನ್ಯ ನಿಯಂತ್ರ ಮಂಡಳಿಯ ಸದಸ್ಯರು, ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುಂಚಿತವಾಗಿ ವಿವಿಧ ಶಾಲೆಗಳಿಂದ ಆಗಮಿಸಿದ್ದ ಸಾವಿರಾರು ಶಾಲಾ ಮಕ್ಕಳು ಹಸಿರು ಬಣ್ಣದ ಟೀ ಶರ್ಟ್ ಮತ್ತು ಹಸಿರು ಟೋಪಿ ಧರಿಸಿ ಕೈಯಲ್ಲಿ ಪ್ರಕೃತಿ ನಾಶದಿಂದ ಆಗುವ ಅನಾಹುತಗಳ ಕುರಿತು ಅರಿವು ಮೂಡಿಸುವಂತಹ ಭಿತ್ತಿ ಪತ್ರಗಳನ್ನು ಹಿಡಿದುಕೊಂಡು ಜಾಗೃತಿ ಜಾಥಾ ನಡೆಸಿದರು.

ಇದರ ಅಂಗವಾಗಿ ಏರ್ಪಡಿಸಲಾಗಿದ್ದ ವಸ್ತುಪ್ರದರ್ಶನದಲ್ಲಿ ಪರಿಸರಕ್ಕೆ ಹಾನಿಕಾರವಾಗಿರುವ ಪ್ಲಾಸ್ಟಿಕ್ ವಸ್ತುಗಳ ಬದಲಿಗೆ ಕಾಗದ, ಥರ್ಮಕೋಲ್, ಅಡಿಕೆ ಹಾಳೆಗಳಿಂದ ತಯಾರಿಸಿದ ಚಮಚ, ತಟ್ಟೆ, ಲೋಟ, ಬಟ್ಟೆಯಿಂದ ತಯಾರಿಸಿದ ಬ್ಯಾಗ್ ಬ್ಯಾನರ್‌ಗಳನ್ನು ಪ್ರದರ್ಶಿಸುವ ಜೊತೆಗೆ ಪ್ಲಾಸ್ಟಿಕದ ಬದಲಿಗೆ ಈ ವಸ್ತುಗಳಿಂದ ತಯಾರಿಸಿದ ವಸ್ತುಗಳನ್ನೇ ಉಪಯೋಗಿಸುವಂತೆ ಕರ ಪತ್ರಗಳನ್ನು ಹಂಚುವ ಮೂಲಕ ಜನರಿಗೆ ಅರಿವು ಮೂಡಿಸುತ್ತಿದ್ದರು. ಜೊತೆಗೆ ತ್ಯಾಜ್ಯ ವಸ್ತುಗಳ ವಿಗಂಡಿಸುವ ಬಗ್ಗೆ, ಸೋಲಾರ್ ವಿದ್ಯುತ್ ಬಳಕೆ, ಮತ್ತು ಹನಿ ನೀರಾವರಿ ಅಳವಡಿಸಿಕೊಳ್ಳುವ ಕುರಿತು ಪ್ರಾತ್ಯಕ್ಷಿಕೆಯನ್ನು ಏರ್ಪಡಿಸಲಾಗಿತ್ತು.

**<u>2016-17 ನೇ ಸಾಲಿನ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿ:</u>**

ಮಾನ್ಯ ಮುಖ್ಯಮಂತ್ರಿಯವರು ಪರಿಸರ ಸಂರಕ್ಷಣೆ ಮತ್ತು ವ್ಯವಸ್ಥಾಪನಾ ಕ್ಷೇತ್ರಗಳಲ್ಲೆ ಗಣನೀಯ ಸೇವೆ ಸಲ್ಲಿಸಿರುವ ವ್ಯಕ್ತಿಗಳ ವಿಭಾಗದಿಂದ ಬೆಂಗಳೂರಿನ ಬಿ.ಎಂ.ಎಸ್ ಕಾಲೇಜ್ ಆಫ್ ಇಂಜಿನಿಯರಿಂಗ್‌ನ ಅಸೋಸಿಯೇಟ್ ಪ್ರೊಫೆಸರ್ ಡಾ.ಸಿ.ಟಿ ಪುಟ್ಟಸ್ವಾಮಿ, ಉತ್ತರ ಕನ್ನಡ ಜಿಲ್ಲೆ, ಕಡಕೇರಿಯ ಎಂ.ಬಿ.ನಾಯ್ಕ ಕಡಕೇರಿ, ಮತ್ತು ರಾಯಚೂರು ಜಿಲ್ಲೆಯ ಪ್ರೊ.ಸಿ.ಡಿ.ಪಾಟೀಲ್ ಅವರಿಗೆ ಮತ್ತು ಸಂಸ್ಥೆಗಳ ವಿಭಾಗದಲ್ಲಿ ಬೆಂಗಳೂರಿನ ಅಣ್ಣೇಶ್ವರ ಗ್ರಾಮ ಪಂಚಾಯತ್, ನಾಗರಹೊಳೆ ಹುಲಿ ಸಂರಕ್ಷಿತ ಫೌಂಡೇಷನ್, ಮತ್ತು ಕಲ್ಬುರ್ಗಿ ಮಹಾನಗರ ಪಾಲಿಕೆಗೆ ಕರ್ನಾಟಕ ರಾಜ್ಯ ಪರಿಸರ ಪ್ರಶಸ್ತಿಯನ್ನು ನೀಡಿ ಗೌರವಿಸಿದರು.

ರಾಜ್ಯ ವಿಜ್ಞಾನ ಪರಿಷತ್ ವತಿಯಿಂದ ಪರಿಸರ ಸಂರಕ್ಷಣೆಯಲ್ಲಿ ತೊಡಗಿಕೊಂಡಿರು ರಾಜ್ಯ ನಾಲ್ಕು ವಿಭಾಗ ದಿಂದ ಒಂದೊಂದು ಶಾಲೆಗಳನ್ನು ಗುರುತಿಸಿ ಪ್ರಶಸ್ತಿಯನ್ನು ನೀಡಲಾಯಿತು, ಬೆಂಗಳೂರು ವಿಭಾಗದಿಂದ ಕೋಲಾರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆ, ಮೈಸೂರು ವಿಭಾಗದಿಂದ ಪುತ್ತೂರಿ ಸುಧನ ವಸತಿ ಶಾಲೆ, ಗುಲ್ಬರ್ಗಾ ವಿಭಾಗದಿಂದ ಬಳ್ಳಾರಿಯ ಬಾಲಕಿಯರ ಸರ್ಕಾರಿ ಶಾಲೆ ಮತ್ತು ಬೆಳಗಾವಿ ವಿಭಾಗದಿಂದ ಮಾರುಗದ್ದೆಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರುಗಳು ಪ್ರಶಸ್ತಿಯನ್ನು ಸ್ವೀಕರಿಸಿದರು.

**ಎಸ್‌ಎಂ:ಬಿಜಿಪಿ**

# <u>ವಿಧಾನಸಭೆಯಲ್ಲಿ ಅಗಲಿದ ಗಣ್ಯರಿಗೆ ಸಂತಾಪ</u>

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

ಇತ್ತೀಚೆಗೆ ನಿಧನರಾದ 11 ಪ್ರಮುಖ ವ್ಯಕ್ತಿಗಳಿಗೆ ಸಂತಾಪ ಸೂಚಿಸುವುದರ ಮೂಲಕ ಮೊದಲ ದಿನದ ಕಲಾಪ ಬೆಳಗ್ಗೆ ಆರಂಭವಾಯಿತು.

ವಿಧಾನಸಭೆಯ ಸಭಾಧ್ಯಕ್ಷರಾದ ಕೆ.ಬಿ. ಕೋಳಿವಾಡ್ ಅವರು ಇತ್ತೀಚೆಗೆ ನಿಧನರಾದ, ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ವಿಮಲಾಗೌಡರಿಗೆ ಸಂತಾಪ ಸೂಚಿಸುತ್ತಾ, ವಿಮಲಾಗೌಡರು ವಿಧಾನ ಪರಿಷತ್ತಿನ ಸದಸ್ಯರಾಗಿ ಮೂರು ಅವಧಿಗೆ ಸೇವೆ ಸಲ್ಲಿಸಿದರಲ್ಲದೆ, 2011 ರಿಂದ 2014 ರವರೆಗೆ ವಿಧಾನ ಪರಿಷತ್ತಿನ ಉಪ ಸಭಾಪತಿಗಳಾಗಿಯೂ ಸೇವೆ ಸಲ್ಲಿಸಿದ್ದಾರೆ. ಒಬ್ಬ ಮಹಿಳಾ ಸಂಘಟಿಕರಾಗಿ ಪ್ರಮುಖ ಪಾತ್ರ ವಹಿಸಿದ್ದಾರೆ ಎಂದರು.

ಎನ್. ವಿ. ಪಾಟೀಲ್, ಮಾಜಿ ವಿಧಾನಸಭೆಯ ಸದಸ್ಯರಿಗೂ ಸಂತಾಪ ಸೂಚಿಸುತ್ತಾ ಪಾಟೀಲ್‌ರು 11 ವಿಧಾನಸಭೆಗೆ ರಾಮದುರ್ಗ ಕ್ಷೇತ್ರದಿಂದ ಆಯ್ಕೆಯಾಗಿ ಸೇವೆ ಸಲ್ಲಿಸಿದ್ದರು. ಶ್ರೀಯುತರು ಸರಳ ಹಾಗೂ ಸಜ್ಜನ ರಾಜಕಾರಣಿಯಾಗಿದ್ದರು ಎಂದು ನೆನೆದರು.

ರೋಣ ಕ್ಷೇತ್ರದ ಶಾಸಕರಾಗಿ ಸೇವೆ ಸಲ್ಲಿಸಿ ಇತ್ತೀಚೆಗೆ ನಿಧನರಾದ ಜ್ಞಾನದೇವ ಶಿವನಾಗಪ್ಪ ಅವರು ರಾಜಕಾರಣಿಯಷ್ಟೇ ಆಗಿರದೇ ಸಾಹಿತಿಯಾಗಿಯೂ ಚಿರಪರಿಚಿತರು. ಹಲವು ಪುಸ್ತಕ, ನಾಟಕಗಳನ್ನು ಇವರು ರಚಿಸಿದ್ದಾರೆ ಎಂದರು.

ವಿಧಾನಸಭೆಯ ಮಾಜಿ ಸದಸ್ಯರಾದ ಅಶ್ವಥ್ ನಾರಾಯಣ ರೆಡ್ಡಿ ಅವರ ನಿಧನಕ್ಕೆ ಸಂತಾಪ ಸೂಚಿಸಿದ ವಿಧಾನಸಭೆಯ ಸಭಾಧ್ಯಕ್ಷರು ಶ್ರೀಯುತರು ಒಂಭತ್ತನೇ ವಿಧಾನಸಭೆಗೆ ಗೌರಿಬಿದನೂರಿನ ಕ್ಷೇತ್ರದಿಂದ ಆಯ್ಕೆಯಾಗಿದ್ದ ಇವರು ಸರಳ ಮತ್ತು ಸಜ್ಜನಿಕೆ ರಾಜಕಾರಣಿ ಎಂದೇ ಹೆಸರಾಗಿದ್ದರು.

ವಿಧಾನಸಭೆಯ ಮಾಜಿ ಸದಸ್ಯರಾದ ಐದು ಮತ್ತು ಆರನೇ ವಿಧಾನಸಭೆಗೆ ಬನ್ನೂರು ಕ್ಷೇತ್ರದಿಂದ ವಿಧಾನಸಭೆಗೆ ಚುನಾಯಿತರಾಗಿದ್ದ ಕೆ. ಮಾದೇಗೌಡ, ಬಾಗಲಕೋಟೆ ಜಿಲ್ಲೆ ಜಮಖಂಡಿ ಕ್ಷೇತ್ರದ ಮಾಜಿ ಶಾಸಕರಾದ ಕಲೂತಿ ರಾಮಪ್ಪ ಮೇಳಪ್ಪ, ಕಲಬುರಗಿ ಜಿಲ್ಲೆಯ ಕಮಲಾಪುರದ ಮಾಜಿ ಶಾಸಕರಾದ ಸುಭಾಸ್ ಎಸ್. ಪಾಟೀಲ್, ಇವರುಗಳ ನಿಧನಕ್ಕೆ ವಿಧಾನ ಸಭೆಯ ಸಭಾಧ್ಯಕ್ಷರು ಸಂತಾಪ ಸೂಚಿಸಿದರು.

ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷರಾದ ದಿವಂಗತ ಹೊ. ಶ್ರೀನಿವಾಸಯ್ಯ, ಸಾಹಿತಿ ಹಾಗೂ ಹಿರಿಯ ಪತ್ರಕರ್ತ ಹೆಚ್.ಎಲ್. ಕೇಶವಮೂರ್ತಿ, ಚಲನಚಿತ್ರ ನಿರ್ಮಾಪಕಿ ಶ್ರೀಮತಿ ಪಾರ್ವತಮ್ಮ ರಾಜ್‌ಕುಮಾರ್, ಅವರುಗಳಿಗೆ ಶ್ರದ್ಧಾಂಜಲಿ ಸಲ್ಲಿಸಿ ಅವರ ಸಾಧನೆಗಳನ್ನು ಸ್ಮರಿಸಿಕೊಳ್ಳಲಾಯಿತು.

ಅಗಲಿದ ಗಣ್ಯರ ಕುರಿತು ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು ಸೇರಿದಂತೆ ಶಾಸಕರಾದ ವೈ.ಎಸ್.ವಿ. ದತ್ತ, ಚಲುವರಾಯಸ್ವಾಮಿ ಹಾಗೂ ಮುನಿರತ್ನ ಸೇರಿದಂತೆ ಹಲವು ಶಾಸಕರು ಮಾತನಾಡಿ ಸಂತಾಪ ಸೂಚಿಸಿದರು.

ಎಸ್‌ಎಂ:ಕವನ:ಜೆಡಿ::ಜಿಪಿಆರ್.

# ಅಮಾನತ್ತು

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿವಿಧ ಜಿಲ್ಲೆಗಳ ಮೂವರು ವೈದ್ಯರು ಸೇರಿದಂತೆ ಓರ್ವ ಅಧೀಕ್ಷಕರನ್ನು ಅಮಾನತ್ತುಗೊಳಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತರು ಆದೇಶ ಹೊರಡಿಸಿದ್ದಾರೆ.

ಹಾವೇರಿ ಜಿಲ್ಲಾ ಆಸ್ಪತ್ರೆಯ ನಿವಾಸಿ ವೈದ್ಯಾಧಿಕಾರಿ ಡಾ. ಟಿ. ನಾಗರಾಜ ನಾಯಕ್ ಅವರನ್ನು ಹಾಗೂ ಶಿವಮೊಗ್ಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ರಾಜೇಶ್ ಸುರಗಿಹಳ್ಳಿ ಇವರನ್ನು ಸಹ ಹಣ ದುರುಪಯೋಗ ಆರೋಪದ ಮೇಲೆ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಸಲಾಗಿದೆ.

ವಿಜಯಪುರ ಜಿಲ್ಲಾ ತರಬೇತಿ ಕೇಂದ್ರ ಪ್ರಾಂಶುಪಾಲ ಡಾ. ಸುರೇಖ ಹಡಗಲಿ ಮತ್ತು ಕಚೇರಿ ಅಧೀಕ್ಷಕರಾದ ಶ್ರೀಮತಿ ನಸೀಮಾ ಬೇಗಂ ಹೈದರಾಬಾದ್ ಅವರುಗಳನ್ನು ಭಷ್ಟಾಚಾರ ನಿಗ್ರಹದಳ ಟ್ರಾಪ್ ಪ್ರಕರಣದಲ್ಲಿ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ

ಎಸ್‌ಎಂ:ಜೆಡಿ:ಜಿಪಿಆರ್.

## ನೂತನ ಸದಸ್ಯರುಗಳ ಪ್ರಮಾಣ ವಚನ ಸ್ವೀಕಾರ

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

ಹಲವು ಕಾರಣಗಳಿಂದ ತೆರವಾಗಿದ್ದ ವಿಧಾನ ಪರಿಷತ್ತಿನ 2 ಸದಸ್ಯ ಸ್ಥಾನಗಳಿಗೆ ನಾಮಕರಣಗೊಂಡ ಇಬ್ಬರು ಸದಸ್ಯರು ಇಂದು ಪ್ರಮಾಣ ವಚನ ಸ್ವೀಕರಿಸಿದರು.

ಮೋಹನ್ ಕೊಂಡಜ್ಜಿಯವರು ಸತ್ಯ ಮತ್ತು ನಿಷ್ಠೆ ಹೆಸರಿನಲ್ಲಿ ಹಾಗೂ ಪಿ.ಆರ್. ರಮೇಶ್ ಭಗವಂತನ ಹೆಸರಿನಲ್ಲಿ ಇಂದು ವಿಧಾನ ಪರಿಷತ್‌ನಲ್ಲಿ ಪ್ರಮಾಣ ವಚನವನ್ನು ಸ್ವೀಕರಿಸಿದರು.

ಕೆಎನ್‌ವಿ:ಜಿಪಿಅರ್

## **ಕಾಡಾನೆ ಹಾವಳಿ ತಡೆಯಲು ಸೂಕ್ತಕ್ರಮ – ಸಚಿವ ರಮಾನಾಥ ರೈ**

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

. ಕಾಡಾನೆ ಹಾವಳಿ ತಪ್ಪಿಸಲು ಆನೆ ನಿರೋಧಕ ಕಂದಕ ನಿರ್ಮಾಣ ಹಾಗೂ ರೈಲು ಕಂಬಿ ತಡೆ ಬೇಲಿ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗಿದ್ದು ಸದರಿ ಕಾಮಗಾರಿಗಳಿಗೆ

2016–17 ನೇ ಸಾಲಿನಲ್ಲಿ 290 ಲಕ್ಷ ರೂ. ಬಿಡುಗಡೆ ಮಾಡಲಾಗಿತ್ತು ಎಂದು ಅರಣ್ಯ ಸಚಿವ ಬಿ. ರಮಾನಾಥ ರೈ ಅವರು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಕೊಡಗು ಜಿಲ್ಲೆಯಲ್ಲಿ ಕಾಡಾನೆ ಹಾವಳಿ ತಡೆಯುವ ಸಂಬಂಧ ಸರ್ಕಾರ ಕೈಗೊಂಡ ಕ್ರಮಗಳ ಬಗ್ಗೆ ಶಾಸಕ ಕೆ.ಜಿ. ಬೋಪಯ್ಯ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ಕೊಡಗು ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಒಟ್ಟು 68.59 ಕಿ.ಮೀ ಆನೆ ನಿರೋಧಕ ಕಂದಕಗಳನ್ನು ನಿರ್ಮಾಣ ಮಾಡಲಾಗಿದೆ. 2016–17 ನೇ ಸಾಲಿನಲ್ಲಿ ನಾಗರಹೊಳೆ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಎರಡೂವರೆ ಕಿ.ಮೀ ರೈಲ್ವೇ ತಡೆ ಬೇಲಿ ನಿರ್ಮಾಣ ಕಾಮಗಾರಿ ನಡೆದಿದ್ದು, ಇನ್ನೂ 600 ಮೀಟರ್ ಕಾಮಗಾರಿ ಪ್ರಗತಿಯಲ್ಲಿದೆ.

ಈ ಕಾಮಗಾರಿಗಳಿಗೆ ನಿಯಮಾನುಸಾರ ಟೆಂಡರ್ ಕರೆದಿದ್ದು ವಿಫಲವಾದ ಟೆಂಡರ್ ಪ್ರಕರಣಗಳಲ್ಲಿ ಸಕ್ಷಮ ಪ್ರಾಧಿಕಾರದಿಂದ ಅನುಮತಿ ಪಡೆಯಲು ಇಲಾಖಾ ಮುಖಾಂತರ ಕಾಮಗಾರಿ ಕೈಗೊಳ್ಳಲಾಗುವುದು ಎಂದರು.

ಕೆಎನ್‌ವಿ:ಜೆಡಿ:ಜಿಪಿಆರ್

## ಸೀಡ್ ಬಾಲ್ ಯೋಜನೆ – ಸ್ವಯಂ ಪ್ರೇರಿತ ಕಾರ್ಯಕ್ರಮ

**– ಸಚಿವ ರಮಾನಾಥ ರೈ**

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

ಸ್ವಯಂ ಪ್ರೇರಿತ ಕಾರ್ಯಕ್ರಮವಾಗಿದ್ದು ಸ್ಥಳೀಯ ಕಾಡು ಜಾತಿಯ ಬೀಜಗಳನ್ನು ಉಚಿತವಾಗಿ ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ ಎಂದು ಅರಣ್ಯ ಸಚಿವ ಬಿ. ರಮಾನಾಥ ರೈ ಅವರು ತಿಳಿಸಿದರು.

ಇಂದು ವಿಧಾನಸಭೆಯ ಕಲಾಪ ಸಂದರ್ಭದಲ್ಲಿ ಶಾಸಕ ಚಲುವರಾಯಸ್ವಾಮಿ ಅವರು ಕೇಳಿದ ಪ್ರಶ್ನೆಗೆ ಸಚಿವರು ಉತ್ತರಿಸಿದರು.

ಕೆಎನ್‌ವಿ:ಜೆಡಿ:ಜಿಪಿಆರ್

# ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ಅವಧಿ ವಿಸ್ತರಣೆ

ಬೆಂಗಳೂರು, ಜೂನ್ 5, (ಕರ್ನಾಟಕ ವಾರ್ತೆ)

2017–18ನೇ ಸಾಲಿಗೆ ರಾಜ್ಯದ ಸರ್ಕಾರಿ ಹಾಗೂ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಪ್ರಥಮ ವರ್ಷದ ಡಿಪ್ಲೋಮಾ ಕೋರ್ಸುಗಳ ಪ್ರವೇಶಕ್ಕೆ ಎಸ್.ಎಸ್.ಎಲ್.ಸಿ/ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಒಟ್ಟಾರೆ ಶೇ.35 ಅಂಕಗಳನ್ನು ಪಡೆದಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಳ್ಳಲು ಮತ್ತು ಸ್ವೀಕರಿಸಲು ಅಂತಿಮ ದಿನಾಂಕ:05–06–2017 ಎಂದು ನಿಗಧಿಪಡಿಸಲಾಗಿತ್ತು.

ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅರ್ಹ ಅಭ್ಯರ್ಥಿಗಳು ವೆಬ್‌ಸೈಟ್‌ನಿಂದ ಅರ್ಜಿ ಪಡೆಯಲು, ಭರ್ತಿ ಮಾಡಿದ ಅರ್ಜಿಯನ್ನು ಮೂಲ ದಾಖಲೆಗಳ ಪರಿಶೀಲನೆಯೊಂದಿಗೆ ರಾಜ್ಯದಲ್ಲಿನ 121 ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್ "ದಾಖಲೆ ಪರಿಶೀಲನೆ ಹಾಗೂ ಆನ್‌ಲೈನ್ ಅರ್ಜಿ ಸಲ್ಲಿಕೆ ಕೇಂದ್ರ" ಗಳಲ್ಲಿ ಆನ್‌ಲೈನ್‌ನಲ್ಲಿ ಸಲ್ಲಿಸಲು ದಿನಾಂಕ: 07–06–2017ರ ಸಂಜೆ 5:00 ಗಂಟೆಯವರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಂತ್ರಿಕ ಶಿಕ್ಷಣ ಇಲಾಖೆಯ ವೆಬ್‌ಸೈಟ್ www.dte.kar.nic.in ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವೆಬ್‌ಸೈಟ್ www.kea.kar.nic.in ಅನ್ನು ನೋಡಲು ಪ್ರಕಟಣೆ ತಿಳಿಸಿದೆ.